Akashvani : Bangalore
Regional Bulletin In Kannada
26.09.2025 / 2.30 pm
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ
<><*<><>*><>
ಮುಖ್ಯಾಂಶಗಳು

೧. ಜಿಲ್ಲಾಧಿಕಾರಿಗಳೊಂದಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ವಿಡಿಯೋ ಸಂವಾದ; ಜಾತಿಗಣತಿ ಕುರಿತು ಪ್ರಗತಿ ಪರಿಶೀಲನೆ
೨. ಹಿಂದೂ ದೇವಾಲಯಗಳು - ಧಾರ್ಮಿಕ ಕೇಂದ್ರಗಳನ್ನು ರಾಜ್ಯ ಸರ್ಕಾರದ ಹತೋಟಿಯಿಂದ ಮುಕ್ತಗೊಳಿಸಲು ರಾಜ್ಯಪಾಲರಿಗೆ ಮನವಿ
೩. ಮೈಸೂರು ದಸರಾ ಮಹೋತ್ಸವ; ರೈತ ದಸರಾಕ್ಕೆ ಕೃಷಿ ಸಚಿವ ಚಲುವರಾಯಸ್ವಾಮಿ ಚಾಲನೆ
೪. ಸಕಲ ಸರ್ಕಾರಿ ಗೌರವಗಳೊಂದಿಗೆ ಹಿರಿಯ ಸಾಹಿತಿ ಎಸ್.ಎಲ್. ಭೈರಪ್ಪ ಅಂತ್ಯಕ್ರಿಯೆ

*******************

ಹಿಂದುಳಿದ ವರ್ಗಗಳ ಆಯೋಗದಿಂದ ರಾಜ್ಯದಲ್ಲಿ ನಡೆಸಲಾಗುತ್ತಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಪ್ರಗತಿ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಗೃಹ ಕಚೇರಿ ಕೃಷ್ಣಾದಲ್ಲಿ ಜಿಲ್ಲಾಧಿಕಾರಿಗಳೊಂದಿಗೆ ವಿಡಿಯೋ ಸಂವಾದ ನಡೆಸಿದರು. ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಚಿವರಾದ ಎಚ್.ಕೆ. ಪಾಟೀಲ್, ಶಿವರಾಜ ತಂಗಡಗಿ, ಕೃಷ್ಣ ಬೈರೇಗೌಡ, ರಹೀಂಖಾನ್, ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷ ಮಧುಸೂಧನ ನಾಯಕ್, ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಮತ್ತಿತರರು ಉಪಸ್ಥಿತರಿದ್ದರು.

*******************

ರಾಜ್ಯದ ಪ್ರಮುಖ ದೇವಾಲಯಗಳು ಮತ್ತು ಹಿಂದೂ ಧಾರ್ಮಿಕ ಕೇಂದ್ರಗಳನ್ನು ಸರ್ಕಾರದ ಹತೋಟಿಯಿಂದ ಮುಕ್ತಗೊಳಿಸಬೇಕು ಎಂದು ವಿಶ್ವ ಹಿಂದೂ ಪರಿಷತ್ ದಕ್ಷಿಣ ಮತ್ತು ಉತ್ತರ ಪ್ರಾಂತ್ಯದ ನಿಯೋಗವೊಂದು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರಿಗೆ ಮನವಿ ಮಾಡಿದೆ. ಇದನ್ನು 'ಕರ್ನಾಟಕ ದೇವಾಲಯ ಯೋಜ' ಎಂದು ಪರಿಗಣಿಸಬೇಕು ಎಂದು ಮನವಿ ಪತ್ರದಲ್ಲಿ ಪ್ರಸ್ತಾಪಿಸಿದ್ದು, ರಾಜ್ಯದಲ್ಲಿ ಈ ಯೋಜನೆಯನ್ನು ಅನುಷ್ಠಾನಕ್ಕೆ ತರಲು ಸೂಕ್ತ ಕಾನೂನು ನಿಯಮಗಳನ್ನು ಜಾರಿಗೊಳಿಸಬೇಕು ಎಂದು ವಿಶ್ವ ಹಿಂದೂ ಪರಿಷತ್ ರಾಜ್ಯಪಾಲರಲ್ಲಿ ಮನವಿ ಮಾಡಿದೆ.

*******************

ವಿಶ್ವವಿಖ್ಯಾತ ಮೈಸೂರು ದಸರಾ ಮಹೋತ್ಸವ ೨೦೨೫ರ ಅಂಗವಾಗಿ ನಗರದ ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನದಲ್ಲಿ ಆಯೋಜಿಸಲಾಗಿದ್ದ, ರೈತ ದಸರಾ ಮೆರವಣಿಗೆಗೆ ಕೃಷಿ ಸಚಿವ ಚಲುವರಾಯಸ್ವಾಮಿ ಇಂದು ಚಾಲನೆ ನೀಡಿದರು. ನಂತರ ಮಾತನಾಡಿದ ಸಚಿವರು, ಮೈಸೂರು ದಸರಾ ರಾಜ್ಯ ಮತ್ತು ರಾಷ್ಟ್ರ ಮಟ್ಟ ಅಲ್ಲದೆ ಅಂತರರಾಷ್ಟ್ರೀಯ ಮಟ್ಟದಲ್ಲಿ ಹೆಸರು ಮಾಡಿರುವುದು ನಮ್ಮ ದೇಶದ ಹೆಮ್ಮೆಯ ವಿಷಯವಾಗಿದೆ ಎಂದರು. ಪಶುಸಂಗೋಪನಾ ಹಾಗೂ ರೇಷ್ಮೆ ಖಾತೆ ಸಚಿವ ಕೆ. ವೆಂಕಟೇಶ್ ಮಾತನಾಡಿ, ರೈತ ದಸರಾದಲ್ಲಿ ಹೊಸ ಹೊಸ ತಂತ್ರಜ್ಞಾನದ

ಪರಿಚಯ ಮತ್ತು ಅವುಗಳ ಉಪಯೋಗದ ಬಗ್ಗೆ ತಿಳಿಸಲಾಗುತ್ತಿದೆ ಎಂದು ಹೇಳಿದರು. ಅರಮನೆ ಕೋಟೆ ಆಂಜನೇಯ ಮೈದಾನದಿಂದ ದೇವರಾಜ ಅರಸು ರಸ್ತೆಯ ಮೂಲಕ ಜೆ. ಕೆ ಗ್ರೌಂಡ್ ವರೆಗೂ ಸಾಗಿದ ರೈತ ಮೆರವಣಿಗೆಯಲ್ಲಿ ಸಾವಿರಾರು ಜನರು ಭಾಗವಹಿಸಿದ್ದರು. ಈ ವೇಳೆ ಜಾನಪದ ಕಲಾತಂಡಗಳ ಪ್ರದರ್ಶನ ಜನಮನ ಸೂರೆಗೊಳಿಸಿತು.

*******************

ಭಾರತ ಸರ್ಕಾರದ ವಾರ್ತಾ ಶಾಖೆ (ಪಿಐಬಿ) ಬೆಂಗಳೂರು ಹಾಗೂ ವಿಜಯಪುರ ಜಿಲ್ಲಾಡಳಿತ ಸಹಯೋಗದಲ್ಲಿ ಕೇಂದ್ರ ಪುರಸ್ಕೃತ ಯೋಜನೆಗಳ ಕುರಿತು ಮಾಧ್ಯಮ ಪ್ರತಿನಿಧಿಗಳಿಗೆ ಆಯೋಜಿಸಿದ್ದ 'ವಾರ್ತಾಲಾಪ ಕಾರ್ಯಾಗಾರ'ಕ್ಕೆ

ಸಂಸದ ರಮೇಶ ಜಿಗಜಿಣಗಿ ಚಾಲನೆ ನೀಡಿದರು.

ಬಳಿಕ ಮಾತನಾಡಿದ ರಮೇಶ್ ಜಿಗಜಿಣಗಿ, ಕೇಂದ್ರ ಸರ್ಕಾರ ೮೧ ಕೋಟಿ ಬಡವರಿಗೆ ಆಹಾರಧಾನ್ಯ ಉಚಿತವಾಗಿ ವಿತರಣೆ ಮಾಡುತ್ತಿರುವುದು ಶ್ಲಾಘನೀಯ. ಪತ್ರಕರ್ತರು ನೋಂದಣಿ ಗೆ ಪರದಾಡುವುದನ್ನು ಸರಳಗೊಳಿಸಲಾಗಿದೆ ಎಂದರು.

(ಧ್ವನಿ- ರಮೇಶ್ ಜಿಗಜಿಣಗಿ)

ವಾರ್ತಾ ಶಾಖೆಯ ಹೆಚ್ಚುವರಿ ಮಹಾ ನಿರ್ದೇಶಕರು ಎಸ್ .ಜಿ.ರವೀಂದ್ರ ಮಾತನಾಡಿ, ಜಿಲ್ಲಾ ತಾಲೂಕು ಹಾಗೂ ಗ್ರಾಮೀಣ ಪತ್ರಕರ್ತರಿಗೆ ಕೇಂದ್ರ ಪುರಸ್ಕೃತ ಯೋಜನೆಗಳ ಬಗ್ಗೆ ಅರಿವು ಮೂಡಿಸುವುದು ವಾರ್ತಾಲಾಪದ ಪ್ರಮುಖ ಉದ್ದೇಶವಾಗಿದೆ ಎಂದರು.

*******************

ಧರ್ಮಸ್ಥಳದ ವಿರುದ್ಧ ಅಪಪ್ರಚಾರ ನಡೆಸಿ ಕ್ಷೇತ್ರದ ವರ್ಚಸ್ಸನ್ನು ಕುಗ್ಗಿಸಲು ರಾಜ್ಯ ಸರ್ಕಾರ ಕುಮ್ಮಕ್ಕು ನೀಡುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಸರ್ವೋಚ್ಛ ನ್ಯಾಯಾಲಯದ ತೀರ್ಪನ್ನು ಮರೆಮಾಚಿ ಸರ್ಕಾರ ವಿರೋಧಿಗಳ ದೂರು ಸ್ವೀಕರಿಸಿ ಎಸ್‌ಐಟಿ ರಚಿಸಿತ್ತು ಎಂಬುದು ಈಗ ಬಹಿರಂಗವಾಗಿದೆ ಎಂದಿದ್ದಾರೆ. ಸರ್ವೋಚ್ಛ ನ್ಯಾಯಾಲಯ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ೨೦೨೫ ಮೇ ೦೫ರಲ್ಲೇ ವಜಾಗೊಳಿಸಿತ್ತು. ಆದಾಗ್ಯೂ ಈ ಸಂಗತಿಯನ್ನು ಮರೆಮಾಚಿ ಸರ್ಕಾರ ಕಟ್ಟುಕಥೆ ಹೆಣೆದ ಆರೋಪವನ್ನು ಆಧರಿಸಿ ದೂರು ಸ್ವೀಕರಿಸಿತು, ಬಳಿಕ ಎಡಪಂಥೀಯರ ಒತ್ತಡಕ್ಕೆ ಮಣಿದು, ಸರ್ಕಾರ ಎಸ್‌ಐಟಿ ರಚಿಸಿತು. ಇದು ಸರ್ವೋಚ್ಛ ನ್ಯಾಯಾಲಯದ ಆದೇಶದ ಸ್ಪಷ್ಟ ಉಲ್ಲಂಘನೆಯಾಗಿದೆ ಎಂದು ವಿಜಯೇಂದ್ರ ಹೇಳಿದ್ದಾರೆ.

*******************

ಮೊನ್ನೆ ನಿಧನರಾದ ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ಹಿರಿಯ ಸಾಹಿತಿ ಎಸ್.ಎಲ್. ಭೈರಪ್ಪ ಅವರ ಪಾರ್ಥಿವ ಶರೀರದ ಅಂತ್ಯಸಂಸ್ಕಾರ ಸಕಲ ಸರ್ಕಾರಿ ಗೌರವಗಳೊಂದಿಗೆ ಮೈಸೂರಿನ ಚಾಮುಂಡಿ ಬೆಟ್ಟದ ತಪ್ಪಲಿನಲ್ಲಿ ಇಂದು ನೆರವೇರಿತು. ಎಸ್.ಎಲ್. ಭೈರಪ್ಪ ಅವರ ಪುತ್ರರು ಅಂತಿಮ ವಿಧಿ ವಿಧಾನ ಕಾರ್ಯಗಳನ್ನು ನೆರವೇರಿಸಿದರು. ಇದಕ್ಕೂ ಮುನ್ನ ಸಶಸ್ತ್ರ ಮೀಸಲು ಪಡೆ ಮೂರು ಸುತ್ತಿನ ಕುಶಾಲ ತೋಪು ಹಾರಿಸಿ ಗೌರವ ಸಲ್ಲಿಸಿದರು. ಕೇಂದ್ರ ಸಚಿವರಾದ ಪ್ರಲ್ಹಾದ್ ಜೋಶಿ, ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್. ಸಿ. ಮಹಾದೇವಪ್ಪ, ಪಶು ಸಂಗೋಪನಾ ಸಚಿವ ಕೆ. ವೆಂಕಟೇಶ್, ಶಾಸಕ ಶ್ರೀ ವತ್ಸ, ವಿಧಾನಪರಿಷತ್ ಸದಸ್ಯ ಕೆ. ಶಿವಕುಮಾರ್ ಮತ್ತಿತರರು ಅಂತ್ಯಕ್ರಿಯೆ ವೇಳೆಯಲ್ಲಿ ಉಪಸ್ಥಿತರಿದ್ದರು.

*******************

ಹಿರಿಯ ಸಾಹಿತಿ ಎಸ್.ಎಲ್. ಭೈರಪ್ಪ ಅವರ ಅಂತ್ಯಕ್ರಿಯೆಯಲ್ಲಿ ಕೇಂದ್ರ ಸರ್ಕಾರದ ಪ್ರತಿನಿಧಿಯಾಗಿ ಸಚಿವ ಪ್ರಹ್ಲಾದ್ ಜೋಶಿ ಭಾಗಿಯಾಗಿ, ಅಂತಿಮ ನಮನ ಸಲ್ಲಿಸಿದರು. ಈ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಎಸ್.ಎಲ್ .ಭೈರಪ್ಪ ನವರು ನಾಡು ಕಂಡ ಸಮರ್ಪಿತ ಸಾಹಿತಿಯಾಗಿದ್ದರು, ಅವರ ಎಲ್ಲಾ ಸಾಹಿತ್ಯಗಳು ಐತಿಹಾಸಿಕ ಅಧ್ಯಯನಗಳ ಮೂಲಕವೇ ರಚಿಸಿದ್ದಾರೆ. ಅತ್ಯಂತ ಕ್ಲಿಷ್ಟಕರವಾದ ಗ್ರಂಥಗಳನ್ನು ಸುದೀರ್ಘ ರೀತಿಯಲ್ಲಿ ಅಧ್ಯಯನ ಮಾಡಿ ವಿಮರ್ಶೆ ಮಾಡುತ್ತಿದ್ದರು ಎಂದು ಸ್ಮರಿಸಿದರು. ಭೈರಪ್ಪ ಬರೆದಿರುವ ಎಲ್ಲಾ ಸಾಹಿತ್ಯಗಳು ಅತೀ ಹೆಚ್ಚು ಭಾಷಾಂತರಗೊಂಡಿವೆ, ದೇಶದಲ್ಲಿ ಅತೀ ಹೆಚ್ಚು ಸಾಹಿತ್ಯಗಳು ಭಾಷಾಂತರಗೊಂಡ ಸಾಹಿತಿ ಇವರಾಗಿದ್ದಾರೆ. ಚೈನಾ, ರಷ್ಯಾ ಮರಾಠಿ ಉರ್ದು ಸೇರಿದಂತೆ ಅನೇಕ ಭಾಷೆಗಳಲ್ಲಿ ಭಾಷಾಂತರಗೊಂಡಿದೆ. ೨೩ಕ್ಕೂ ಹೆಚ್ಚು ಸಾಹಿತ್ಯಗಳು ಮರುಮುದ್ರಣಗೊಂಡಿವೆ. ಪದ್ಮಭೂಷಣ, ಸರಸ್ವತಿ ಸಮ್ಮಾನ್ ಪ್ರಶಸ್ತಿಗೆ ಭಾಜನಾರಾಗಿದ್ದಾರೆ ಎಂದು ತಿಳಿಸಿದರು. ರಾಜ್ಯ ಸರ್ಕಾರ ಸಕಲ ಗೌರವ ನೀಡಿ ಯಾವುದೇ ಚ್ಯುತಿ ಬರದಂತೆ ಕಾರ್ಯ ನಿರ್ವಹಿಸಿದ್ದಾರೆ ಎಂದು ಪ್ರಲ್ಹಾದ್ ಜೋಶಿ ಹೇಳಿದರು.

*******************

ಕೇಂದ್ರ ಸರ್ಕಾರದ ಮಹತ್ವಕಾಂಕ್ಷೆಯ 'ಸ್ವಚ್ಛತೆಯೇ ಸೇವಾ' ಅಭಿಯಾನದ ಅಂಗವಾಗಿ ರಾಜ್ಯದ ವಿವಿಧೆಡೆ ಸ್ವಚ್ಛತಾ ಕಾರ್ಯ ನಡೆಸುವ ಮೂಲಕ ಜನರಲ್ಲಿ ಅರಿವು ಮೂಡಿಸಲಾಗುತ್ತಿದೆ. ಗದಗದಲ್ಲಿ ಆಯೋಜಿಸಿದ್ದ ಸಾಮೂಹಿಕ ಸ್ವಚ್ಚತಾ ಶ್ರಮದಾನಕ್ಕೆ ಜಿಲ್ಲಾಧಿಕಾರಿ ಸಿ ಎನ್ ಶ್ರೀಧರ್ ಚಾಲನೆ ನೀಡಿದರು. ನಂತರ ಅವರು ಮಾತನಾಡಿ, ಗದಗದಲ್ಲಿ ಮಾದರಿಯಾಗುವಂತೆ ಪೌರಕಾರ್ಮಿಕರು ಮತ್ತು ಸ್ಥಳಿಯರು ಸಹಕರಿಸಿ ನಗರವನ್ನು ಸ್ವಚ್ಚವಾಗಿರಿಸಿಕೊಳ್ಳಬೇಕು ಎಂದು ಕರೆ ನೀಡಿದರು. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿಯ ಕೋಟೆಯ ಸ್ವಚ್ಚತಾ ಕಾರ್ಯದಲ್ಲಿ ಜಿಲ್ಲಾಧಿಕಾರಿ ಎ.ಬಿ ಬಸವರಾಜು ಭಾಗವಹಿಸಿದ್ದರು. ಇದೇ ವೇಳೆ ಅವರು ಮಾತನಾಡಿ ಸ್ವಚ್ಚತೆಯನ್ನು ಕಾಪಾಡುವುದು ಪ್ರತಿಯೊಬ್ಬ ವ್ಯಕ್ತಿಯ ಜವಾಬ್ದಾರಿಯಾಗಿದೆ ಎಂದರು. ಕೋಲಾರ ಜಿಲ್ಲೆ ಮಾಲೂರು ತಾಲ್ಲೂಕಿನ ತೊರ್ನಹಳ್ಳಿ ಗ್ರಾಮದಲ್ಲಿ ಸಾಮೂಹಿಕ ಶ್ರಮದಾನವನ್ನು ಸಾಂಕೇತಿಕವಾಗಿ ಉದ್ಘಾಟಿಸಿ ಮಾತನಾಡಿದ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಡಾ. ಪ್ರವೀಣ್. ಪಿ. ಬಾಗೇವಾಡಿ, ಸಾರ್ವಜನಿಕರಿಗೆ ಸ್ವಚ್ಛತೆಯ ಅರಿವು ಮೂಡಿಸುವುದು ಕಾರ್ಯಕ್ರಮದ ಮೂಲ ಉದ್ದೇಶವಾಗಿದೆ ಎಂದರು.

ಹುಬ್ಬಳ್ಳಿ ರೈಲ್ವೆ ವಿಭಾಗವು ಸ್ವಚ್ಛತೆಯೇ ಸೇವೆ ಅಭಿಯಾನದ ಅಂಗವಾಗಿ ಅಕ್ಟೋಬರ್ ೨ರವರೆಗೆ ವಿಶೇಷ ಕಾರ್ಯಕ್ರಮಗಳನ್ನು ಆಯೋಜಿಸಿದೆ ಎಂದು ನೈಋತ್ಯ ರೈಲ್ವೆಯ ಮುಖ್ಯ ಸಾರ್ವಜನಿಕ ಸಂಪರ್ಕ ಅಧಿಕಾರಿ ಮಂಜುನಾಥ್ ಕಾನಮಡಿ ಅವರು ಆಕಾಶವಾಣಿಗೆ ತಿಳಿಸಿದರು.

*******************

ಹಾವೇರಿ ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನಲ್ಲಿ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ರೈತರಿಂದ ಎಫ್.ಎ.ಕ್ಯೂ ಗುಣಮಟ್ಟದ ಭತ್ತ ಖರೀದಿಸಲು ಬೆಂಬಲ ಬೆಲೆ ನಿಗದಿಪಡಿಸಲಾಗಿದ್ದು, ರೈತರಿಂದ ಭತ್ತ ಖರೀದಿಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳುವಂತೆ ಜಿಲ್ಲಾಧಿಕಾರಿ ವಿಜಯ ಮಹಾಂತೇಶ ದಾನಮ್ಮನವರ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಜಿಲ್ಲೆಯ ವಿವಿಧ ತಾಲ್ಲೂಕಿನ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಆವರಣದಲ್ಲಿ ಕೇಂದ್ರ ಆರಂಭಿಸಬೇಕು. ನೋಂದಣಿ ಪ್ರಕ್ರಿಯೆಯಲ್ಲಿ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಲು ಕ್ರಮ ಕೈಗೊಳ್ಳಬೇಕು ಎಂದು ನಿರ್ದೇಶಿಸಿದ್ದಾರೆ.

*******************